**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2018/2017-18 ದಿನಾಂಕ: 13.09.2017

**:: ಜ್ಞಾಪನ ::**

ವಿಷಯ:- 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಶಾಲಾ/ ಕಾಲೇಜುಗಳಿಂದ ಖಾಸಗಿ ಅಭ್ಯರ್ಥಿಗಳ ನೊಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿ ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:- ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2018/ 2017-18 ದಿನಾಂಕ: 08.08.2017 ಮತ್ತು ಜ್ಞಾಪನ ದಿನಾಂಕ: 04.09.2017.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳಿಂದ ಹಾಜರಾಗುವ ವಿದ್ಯಾರ್ಥಿಗಳಿಂದ ಹಾಗೂ ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಉಲ್ಲೇಖದ ದಿನಾಂಕ: 08-08-2017ರ ಅಧಿಸೂಚನೆಯಲ್ಲಿ ಮತ್ತು ಜ್ಞಾಪನ ದಿನಾಂಕ: 04.09.2017ರಲ್ಲಿ ಶುಲ್ಕ ಪಾವತಿಗೆ ದಿನಾಂಕ ವಿಸ್ತರಿಸಲಾಗಿತ್ತು.

ಖಾಸಗಿ ಅಭ್ಯರ್ಥಿಗಳ ನೊಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ನೊಂದಣಿ ಮತ್ತು ಪರೀಕ್ಷಾ ಶುಲ್ಕ ಪಾವತಿ ಹಾಗೂ ಪ್ರಸ್ತಾವನೆ ಸಲ್ಲಿಕೆ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ದಿನಾಂಕ: 04.09.2017ರ ಜ್ಞಾಪನಾದಲ್ಲಿ ನಿಗಧಿಪಡಿಸಿದ್ದ ದಿನಾಂಕ | **ವಿಸ್ತರಣೆ ಮಾಡಿದ ಕೊನೆಯ ದಿನಾಂಕ** |
|---|---|---|---|
| **01** | 2018ರ ಏಪ್ರಿಲ್ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳುವುದು. | 12.09.2017 | 18.09.2017 |
| **02** | ಶಾಲೆಯವರು 2018ರ ಪರೀಕ್ಷೆಗೆ ಹೊಸದಾಗಿ ನೊಂದಣಿಯಾದ ಖಾಸಗಿ ಅಭ್ಯರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕಾರ. | 14.09.2017 | 20.09.2017 |
| **03** | ಹೊಸದಾಗಿ ನೊಂದಣಿಯಾದ ಖಾಸಗಿ ಅಭ್ಯರ್ಥಿಗಳ ಪರೀಕ್ಷಾ ಶುಲ್ಕ ಬ್ಯಾಂಕಿಗೆ NEFT ಚಲನ್ ಮೂಲಕ ಜಮೆ. | 16.09.2017 | 21.09.2017 |
| **04** | ಹೊಸದಾಗಿ ನೊಂದಣಿಯಾದ ಖಾಸಗಿ ಅಭ್ಯರ್ಥಿಗಳ ನಾಮಿನಲ್ ರೋಲ್ ಪ್ರಸ್ತಾವನೆ ಹಾಗೂ ಬ್ಯಾಂಕ್ ಚಲನ್‌ನ ಮೂಲ ಪ್ರತಿ ಶಾಲೆಗಳಿಂದ ಮಂಡಳಿಗೆ ಕಳುಹಿಸುವುದು. | 21.09.2017 | 21.09.2017 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ 2018ರ ಪರೀಕ್ಷೆಗೆ ಹೊಸದಾಗಿ ನೊಂದಣಿಯಾದ ಖಾಸಗಿ ಅಭ್ಯರ್ಥಿಗಳಿಂದ ಮಾತ್ರ ಶುಲ್ಕ ಸ್ವೀಕರಿಸಬಹುದಾಗಿದೆ. ಈ ಮಾಹಿತಿಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳಿಗೆ ಸೂಚಿಸಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ವಿ.ಎಸ್ ಗೀತ)
ಕಾರ್ಯದರ್ಶಿಗಳು

ಗೆ

1) ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4) ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5) ಮಂಡಳಿಯ ಗಣಕ ಶಾಖೆಯ ಶಾಖಾಧಿಕಾರಿಗಳಿಗೆ ಮಂಡಳಿಯ ವೆಬ್ ಸೈಟ್ ನಲ್ಲಿ ಅಪ್ ಲೋಡ್ ಮಾಡಲು ತಿಳಿಸಿದೆ.